ಕರ್ನಾಟಕ ಸರ್ಕಾರ

ಅಕ್ಟೋಬರ್ 27, 2017

# ಡಿ ವೈ ಎಸ್ ಪಿ ಎಂ. ಕೆ. ಗಣಪತಿ ಆತ್ಮಹತ್ಯಾ ಪ್ರಕರಣ, ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಸಿ ಬಿ ಐ ನಿಂದ ಮುಂದುವರೆದ ಪ್ರಥಮ ಮಾಹಿತಿ ವರದಿ ದಾಖಲು ಕೆ. ಜೆ. ಜಾರ್ಜ್ ರಾಜೀನಾಮೆ ಅಗತ್ಯವಿಲ್ಲ : ಸಿದ್ದರಾಮಯ್ಯ ಸಮರ್ಥನೆ

ಬೆಂಗಳೂರು, ಅಕ್ಟೋಬರ್ 27:

ಮಂಗಳೂರು ಪಶ್ಚಿಮ ವಲಯದ ಆರಕ್ಷಕ ಮಹಾ ನಿರೀಕ್ಷಕರ ಕಚೇರಿಯಲ್ಲಿ ಇಲಾಖಾ ವಿಚಾರಣಾ ವಿಭಾಗದ ಆರಕ್ಷಕ ಉಪಾಧೀಕ್ಷಕರಾಗಿ (ಡೆಪ್ಯುಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್) ಸೇವೆ ಸಲ್ಲಿಸುತ್ತಿದ್ದ ಎಂ ಕೆ ಗಣಪತಿ ಅವರು 2016 ರ ಜುಲೈ 7 ರಂದು ಕೊಡಗು ಜಿಲ್ಲೆಯ ಮಡಿಕೇರಿಯ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ವಿನಾಯಕ ಲಾಡ್ಜ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡ ಪ್ರಕರಣ ಕುರಿತು ಕುಶಾಲನಗರದ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದ ನಿರ್ದೇಶನದ ಮೇರೆಗೆ ಕುಶಾಲನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಥಮ ಮಾಹಿತಿ ವರದಿಯ ಮುಂದುವರೆದ ಭಾಗವನ್ನೇ ಕೇಂದ್ರ ತನಿಖಾ ಸಂಸ್ಥೆ ( ಸಿ ಬಿ ಐ ) ತನ್ನ ಪ್ರಥಮ ಮಾಹಿತಿ ವರದಿಯಲ್ಲಿ ದಾಖಲಿಸಿರುವ ಹಿನ್ನೆಲೆಯಲ್ಲಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ ಜೆ ಜಾರ್ಜ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಇಲ್ಲಿ ಸಮರ್ಥಿಸಿಕೊಂಡರು.

ಭಾರತ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಹಿನ್ನೆಲೆಯಲ್ಲಿ ಗುರುವಾರ ಸಿ ಬಿ ಐ ಕೆ ಜೆ ಜಾರ್ಜ್ ಹಾಗೂ ಇಬ್ಬರು ಹಿರಿಯ ಪೊಲೀಸ್ ಅಧಿಕಾರಿಗಳ ವಿರುದ್ಧ ಪ್ರಥಮ ಮಾಹಿತಿ ವರದಿಯನ್ನು ದಾಖಲಿಸಿದ ಬೆನ್ನಲ್ಲೇ, ತಮ್ಮ ಸಚಿವ ಸಂಪುಟದ ಹಿರಿಯ ಸಚಿವರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಕರೆದ ತುರ್ತು ಪತ್ರಿಕಾಗೋಷ್ಠಿಯಲ್ಲಿ ಸಿದ್ದರಾಮಯ್ಯ ಅವರು ಮಾತನಾಡುತ್ತಿದ್ದರು.

ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಸಚಿವ ಕೆ ಜೆ ಜಾರ್ಜ್, ರಾಜ್ಯ ಗುಪ್ತದಳದ ಮುಖ್ಯಸ್ಥ ಹಾಗೂ ಆರಕ್ಷಕ ಮಹಾ ನಿರ್ದೇಶಕ ಆಶಿತ್ ಮೋಹನ್ ಪ್ರಸಾದ್ ಹಾಗೂ ವಿಶಿಷ್ಠ ಗುರುತು ಪ್ರಾಧಿಕಾರ ( ಆಧಾರ್ ) ದ ಉಪ ಮಹಾ ನಿರ್ದೇಶಕ ಪ್ರಣಬ್ ಮೊಹಂತಿ ಅವರ ವಿರುದ್ಧ ಸಿ ಬಿ ಐ ಹೊಸ ಪ್ರಥಮ ಮಾಹಿತಿ ವರದಿಯನ್ನು ದಾಖಲಿಸಿಲ್ಲ. ಬದಲಾಗಿ ಪ್ರಕರಣಕ್ಕೆ

ಸಂಬಂಧಿಸಿದಂತೆ ಇದೀಗ ದಾಖಲಿಸಿರುವ ಪ್ರಥಮ ಮಾಹಿತಿ ವರದಿ ಹಿಂದಿನ ಪ್ರಥಮ ಮಾಹಿತಿ ವರದಿಯ ಮುಂದುವರೆದ ಭಾಗವಾಗಿದೆ. ಈ ಹಿಂದೆ ಪ್ರಥಮ ಮಾಹಿತಿ ವರದಿ ದಾಖಲಾದಾಗ ಕೆ. ಜೆ. ಜಾರ್ಜ್ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಸಂಪುಟದಿಂದ ಹೊರ ನಡೆದಿದ್ದರು. ಸಮಗ್ರ ತನಿಖೆ ನಡೆಸಿದ ಸಿ ಐ ಡಿ ಪ್ರಕರಣ ಕುರಿತು ಬಿ ವರದಿ ಸಲ್ಲಿಸಿತು. ನಂತರ ಕೆ ಜೆ ಜಾರ್ಜ್ ಅವರು ಮತ್ತೆ ಸಂಪುಟಕ್ಕೆ ಸೇರ್ಪಡೆಯಾಗಿದ್ದಾರೆ. ಆದರೆ, ಮತ್ತೆ ಅದೇ ಪ್ರಥಮ ಮಾಹಿತಿ ವರದಿಯನ್ನು ಆಧರಿಸಿ ಸಿ ಬಿ ಐ ತನಿಖೆ ನಡೆಸಲು ಮುಂದಾಗಿರುವ ಹಿನ್ನೆಲೆಯಲ್ಲಿ ರಾಜ್ಯ ಸಚಿವ ಸಂಪುಟಕ್ಕೆ ಜಾರ್ಜ್ ಅವರ ರಾಜೀನಾಮೆ ಅನಗತ್ಯ ಎಂದು ಮುಖ್ಯಮಂತ್ರಿ ಪ್ರತಿಪಾದಿಸಿದರು.

ಅಲ್ಲದೆ, ಪ್ರಥಮ ಮಾಹಿತಿ ವರದಿ ಎಂಬುದು ಆರೋಪಗಳ ಸಾಕ್ಷಿಯ ಪ್ರಮಾಣ ಪತ್ರವಲ್ಲ ! ಜಾರ್ಜ್ ಅವರು ಗೃಹ ಖಾತೆಯನ್ನು ನಿರ್ವಹಿಸುತ್ತಿಲ್ಲ. ಅಂತೆಯೇ, ಸಿ ಬಿ ಐ ಕೂಡಾ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿ ಒಳಪಡುವ ತನಿಖಾ ಸಂಸ್ಥೆ ಅಲ್ಲ. ಆದಕಾರಣ, ಜಾರ್ಜ್ ಅವರು ಸಚಿವರಾಗಿ ಮುಂದುವರೆದರೆ ತನಿಖೆಯ ಮೇಲೆ ಪ್ರಭಾವ ಬೀರುತ್ತಾರೆ ಎಂಬ ಆರೋಪಗಳಿಗೆ ಹುರುಳಿಲ್ಲ.

ಪ್ರಥಮ ಮಾಹಿತಿ ವರದಿ ದಾಖಲಾದೊಡನೆಯೇ ರಾಜೀನಾಮೆ ನೀಡಬೇಕು ಎಂದಾದರೆ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಂಪುಟದಲ್ಲಿ ಎಂಟು ಸಂಪುಟ ದರ್ಜೆ ಸಚಿವರನ್ನು ಒಳಗೊಂಡಂತೆ 20 ಸಚಿವರ ವಿರುದ್ಧ ಕ್ರಿಮಿನಲ್ ಪ್ರಕರಣಗಳಲ್ಲಿ ಪ್ರಥಮ ಮಾಹಿತಿ ವರದಿಗಳು ದಾಖಲಾಗಿವೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ವಿರುದ್ಧವೂ ಕೊಲೆ ಯತ್ನ ಪ್ರಕರಣ ದಾಖಲಾಗಿವೆ. ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷ ಬಿ ಎಸ್ ಯಡಿಯೂರಪ್ಪ ಸೇರಿದಂತೆ ಅದೇ ಪಕ್ಷದ ಹಲವು ಸಂಸದರ ವಿರುದ್ಧ ಹಲವು ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಆದಕಾರಣ, ಇತರರ ರಾಜೀನಾಮೆ ಕೇಳುವ ನೈತಿಕ ಹಕ್ಕು ಇವರಿಗೆ ಇಲ್ಲ ಎಂದು ಮುಖ್ಯಮಂತ್ರಿ ಅಭಿಪ್ರಾಯಪಟ್ಟರು.

ಎಲ್ಲರಿಗೂ ನೈತಿಕತೆಯ ಬೋಧಿಸುವ ಈ ಜನ, ಮೊದಲು ತಾವೇ ರಾಜೀನಾಮೆ ನೀಡಿ ಇತರರಿಗೆ ಮಾದರಿಯಾಗಲಿ. ರಾಜ್ಯ ವಿಧಾನ ಸಭಾ ಚುನಾವಣೆಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಎಲ್ಲಕ್ಕೂ ರಾಜಕೀಯ ಬಣ್ಣ ಹಚ್ಚಿ ದುರ್ಲಾಭ ಪಡೆಯಲು ಯತ್ನಿಸುತ್ತಿರುವ ಈ ನಾಯಕರನ್ನು ನಾವೂ ಕೂಡಾ ರಾಜಕೀಯವಾಗಿಯೇ ಎದುರಿಸುತ್ತೇವೆ ಎಂದು ಮಾಧ್ಯಮದವರ ಪ್ರಶ್ನೆಗೆ ಸಿದ್ದರಾಮಯ್ಯ ಅವರು ಉತ್ತರಿಸಿದರು.

ಎಂ ಕೆ ಗಣಪತಿ ಅವರ ತಂದೆ ಕುಶಾಲಪ್ಪ ಅವರು ಸರ್ವೋಚ್ಚ ನ್ಯಾಯಾಲಯದಲ್ಲಿ ಸಿ ಐ ಡಿ ಸಲ್ಲಿಸಿರುವ ಬಿ ವರದಿಯನ್ನು ಪ್ರಶ್ನಿಸಿಲ್ಲ. ಅಂತೆಯೇ, ಸರ್ವೋಚ್ಚ ನ್ಯಾಯಾಲಯವೂ ಕೂಡಾ ತನ್ನ ತೀರ್ಪಿನಲ್ಲಿ ಕೆ ಜೆ ಜಾರ್ಜ್ ಒಳಗೊಂಡಂತೆ ಯಾರ ಹೆಸರನ್ನೂ ಪ್ರಸ್ತಾಪ ಮಾಡಿಲ್ಲ. ಯಾವ ಅಭಿಪ್ರಾಯವನ್ನೂ ಅಭಿವ್ಯಕ್ತಿಗೊಳಿಸಿಲ್ಲ. ಸೂಕ್ತ ಶ್ರೇಣಿಯ ಅಧಿಕಾರಿಯ ಉಸ್ತುವಾರಿಯಲ್ಲಿ ಮೂರು ತಿಂಗಳೊಳಗೆ ತನಿಖೆ ಪೂರ್ಣಗೊಳಿಸಬೇಕು ಎಂದು ಸಿ ಬಿ ಐ ಗೆ ಸೂಚಿಸಿದೆ.

ಈ ಎಲ್ಲಾ ಅಂಶಗಳನ್ನು ಅನುಲಕ್ಷಿಸಿದಲ್ಲಿ ಜಾರ್ಜ್ ಅವರ ರಾಜೀನಾಮೆ ಅನಗತ್ಯ ಎಂದು ಮುಖ್ಯಮಂತ್ರಿ ಪುರುಚ್ಚರಿಸಿದರು.

ಗೃಹ ಸಚಿವ ರಾಮಲಿಂಗಾರೆಡ್ಡಿ, ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ. ಆರ್. ರಮೇಶ್ ಕುಮಾರ್, ಲೋಕೋಪಯೋಗಿ ಸಚಿವ ಡಾ ಹೆಚ್. ಸಿ. ಮಹದೇವಪ್ಪ, ಇಂಧನ ಸಚಿವ ಡಿ. ಕೆ. ಶಿವಕುಮಾರ್, ಜಲ ಸಂಪನ್ಮೂಲ ಸಚಿವ ಎಂ ಬಿ ಪಾಟೀಲ್, ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್.ರೋಷನ್ ಬೇಗ್, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷ ದಿನೇಶ್ ಗುಂಡೂರಾವ್, ರಾಜ್ಯ ವಿಧಾನ ಸಭೆಯಲ್ಲಿನ ಸರ್ಕಾರಿ ಮುಖ್ಯ ಸಚೇತಕ ಅಶೋಕ್ ಎಂ ಪಟ್ಟಣ್ ಅವರೂ ಸೇರಿದಂತೆ ಹಲವು ಗಣ್ಯರು ಈ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

***********

ಡಿ ಪಿ ಎಂ